# ಶಿವಮೊಗ್ಗ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಕಛೇರಿ,

## ಅಧಿಸೂಚನೆ ಸಂಖ್ಯೆ: **ADM.DJS.20473/2018**

## ದಿನಾಂಕ :12 ನೇ ಡಿಸೆಂಬರ್ ಮಾಹೆ 2018.

ವಿಷಯಃ ಬೆರಳಚ್ಚುಗಾರ ಹುದ್ದೆಗಳ ನೇಮಕಾತಿ ಬಗ್ಗೆ.

ಉಲ್ಲೇಖಃ
1. ಮಾನ್ಯ ಉಚ್ಚ ನ್ಯಾಯಾಲಯದ ಪತ್ರ ಸಂಖ್ಯೆ: **LCA II 128/2012** ದಿ: **18.09.2018.** r/w **G.O.No.LAW 156 LAC 2018 Dated 07.08.2018.**
2. **Hon'ble High Court's letter No.LCA.II.128/2012 Dated 1.8.2018 r/w G.O.No.LAW 137 LCE 2014 Dated 28.3.2016.**
3. ಮಾನ್ಯ ಉಚ್ಚ ನ್ಯಾಯಾಲಯದ ಪತ್ರ ಸಂಖ್ಯೆ: D.O.Letter No.**LCA II 128/2012** ದಿ: **7.12.2018**

**ಆನ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ :18.01.2019.**

ಶಿವಮೊಗ್ಗ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯ ಘಟಕದ ವಿವಿಧ ನ್ಯಾಯಾಲಯಗಳಲ್ಲಿ ಕೆಳಗೆ ವಿವರಿಸಿರುವಂತೆ ಖಾಲಿ ಇರುವ ಬೆರಳಚ್ಚುಗಾರ **(TYPIST)** ಹುದ್ದೆಗಳಿಗೆ ಹಾಗೂ ಉಲ್ಲೇಖ 2ರ ಆದೇಶದಂತೆ ಮಂಜೂರಾದ ನ್ಯಾಯಾಲಯಗಳ ಮಂಜೂರಾದ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಅಹ್ವಾನಿಸಲಾಗಿದೆ. ಅರ್ಹ ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸತಕ್ಕದ್ದು.

ಅರ್ಜಿಗಳನ್ನು ಶಿವಮೊಗ್ಗದ ಜಿಲ್ಲಾ ನ್ಯಾಯಾಲಯ ವೆಬ್‌ಸೈಟ್ **https://districts.ecourts.gov.in/shivamogga/online-recruitment** ಅಥವ **https://karnatakajudiciary.kar.nic.in/districtrecruitment.asp** ನಲ್ಲಿ ನೀಡಲಾದ ಲಿಂಕ್ ಮೂಲಕ ಆನ್‌ಲೈನ್‌ನಲ್ಲಿ ದಿನಾಂಕಃ- **17.12.2018** ರಿಂದ ದಿನಾಂಕ **18.01.2019**ರ ರಾತ್ರಿ 11.59 ರವರೆಗೆ ಮಾತ್ರ ಸಲ್ಲಿಸತಕ್ಕದ್ದು.

**1. ಹುದ್ದೆಗಳ ಸಂಖ್ಯೆ : 11**

ಹುದ್ದೆಗಳ ವರ್ಗೀಕರಣ :

| ವರ್ಗೀಕರಣ | ಇತರೆ | ಗ್ರಾಮೀಣ ಅಭ್ಯರ್ಥಿ | ಮಹಿಳೆ | ಕನ್ನಡ ಮಾಧ್ಯಮ | ಅಂಗವಿಕಲ | ಮಾಜಿ ಸೈನಿಕ | ಒಟ್ಟು |
|---|---|---|---|---|---|---|---|
| ಸಾ.ಅ | 1 | 1 | 1 | - | 1(ಶ್ರವಣ ದೋಷ) | 1 | 5 |
| ಪರಿಶಿಷ್ಟ ಜಾತಿ | - | 1 | - | 1 | - | - | 2 |
| ಪ್ರವರ್ಗ-1 | - | - | - | - | 1(ದೃಷ್ಟಿ ಮಾಂದ್ಯ) | - | 1 |
| ಪ್ರವರ್ಗ-2ಎ | - | 1 | - | - | - | - | 1 |
| ಪ್ರವರ್ಗ 2-ಬಿ | - | - | - | - | 1(ದೃಷ್ಟಿ ಮಾಂದ್ಯ) | - | 1 |
| ಪ್ರವರ್ಗ-3ಬಿ | - | - | - | - | 1(ದೃಷ್ಟಿ ಮಾಂದ್ಯ) | - | 1 |
| ಒಟ್ಟು | 1 | 3 | 1 | 1 | 4 | 1 | 11 |

ಟಿಪ್ಪಣಿ : ಮೇಲ್ಕಂಡ 11 ಬೆರಳಚ್ಚುಗಾರ ಹುದ್ದೆಗಳಲ್ಲಿ 08 ಹುದ್ದೆಗಳು ಈಗಾಗಲೇ ಖಾಲಿ ಇವೆ. 3 ಹುದ್ದೆಗಳು ಇನ್ನೂ ಕಾರ್ಯಾರಂಭವಾಗಬೇಕಾದ ನ್ಯಾಯಾಲಯಗಳು ಎಂದರೆ (1) 5ನೇ ಹೆಚ್ಚುವರಿ ವ್ಯವಹಾರ ನ್ಯಾಯಾಧೀಶರು ಮತ್ತು ಪ್ರದನ್ಯಾದಂ. ನ್ಯಾಯಾಲಯ, ಶಿವಮೊಗ್ಗ. (2) ಹೆಚ್ಚುವರಿ ವ್ಯವಹಾರ ನ್ಯಾಯಾಧೀಶರು ಮತ್ತು ಪ್ರದನ್ಯಾದಂ. ನ್ಯಾಯಾಲಯ ಸೊರಬ ಮತ್ತು (3) 2ನೇ ಹೆಚ್ಚುವರಿ ವ್ಯವಹಾರ ನ್ಯಾಯಾಧೀಶರು ಮತ್ತು ಪ್ರದನ್ಯಾದಂ. ಶಿಕಾರಿಪುರ ನ್ಯಾಯಾಲಯಗಳಿಗೆ ಮಂಜೂರಾಗಿದ್ದು ಆ 3 ಹುದ್ದೆಗಳಿಗೆ ಸದ್ರಿ ನ್ಯಾಯಾಲಯಗಳು ಕಾರ್ಯರಂಭವಾದ ನಂತರ ನೇಮಕಾತಿ ಆದೇಶವನ್ನು ಹೊರಡಿಸಲಾಗುವುದು.

3) ವೇತನ ಶ್ರೇಣಿ : **21400-500-22400-550-24600-600-27000-650-29600-750-32600-850-36000-950-39800-1100-42000** ಹಾಗೂ ಇತರೆ ಭತ್ಯೆಗಳು.

4) ಶೈಕ್ಷಣಿಕ ವಿದ್ಯಾರ್ಹತೆ :-

ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಎಸ್.ಎಸ್.ಎಲ್.ಸಿ.ಪರೀಕ್ಷೆಯಲ್ಲಿ ಉತ್ತೀರ್ಣತೆ ಹಾಗೂ ಕನ್ನಡ ಮತ್ತು ಇಂಗ್ಲೀಷ್ ಬೆರಳಚ್ಚು ಹಿರಿಯ ದರ್ಜೆ ಪರೀಕ್ಷೆ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆ.

5) ಮೇಲ್ಕಂಡ ಹುದ್ದೆಗಳ ವರ್ಗೀಕರಣವನ್ನು ಈ ಕೆಳಕಂಡ ಸರ್ಕಾರಿ ಆಜ್ಞೆಗಳ ಪ್ರಕಾರ ಮಾಡಲಾಗಿದೆ:

(1) ಸರ್ಕಾರಿ ಆದೇಶ ಸಂಖ್ಯೆ: **DPAR 08 SRS 95,** ದಿನಾಂಕ **20-6-1995.**
(2) ಸರ್ಕಾರಿ ಆದೇಶ ಸಂಖ್ಯೆ: **DPAR 08 SRS 95,** ದಿನಾಂಕ **4-1-2008.**
(3) ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 128 ಸೆನೆನಿ 2006 ದಿನಾಂಕ:1.8.2009.
(4) ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 143 ಸೆನೆನಿ 2015 ದಿನಾಂಕ:8.1.2016.

6) ವಯೋಮಿತಿ:

(ಅ) ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು ಕನಿಷ್ಟ 18 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು ,

(ಬ) ಗರಿಷ್ಠ ವಯೋಮಿತಿ: ಸಾಮಾನ್ಯ ವರ್ಗ : **35** ವರ್ಷಗಳು
2ಎ, 2ಬಿ, 3ಎ, 3ಬಿ : **38** ವರ್ಷಗಳು
ಪರಿಶಿಷ್ಟ ಜಾತಿ :ಪರಿಶಿಷ್ಟ ಪಂಗಡ : ಪ್ರವರ್ಗ-1 : **40** ವರ್ಷಗಳು

ವಿ:ಸೂ: ಮಾಜಿ ಸೈನಿಕರಿಗೆ ಗರಿಷ್ಟ ವಯೋಮಿತಿ ಅವನು ಕೇಂದ್ರದ ನಿಯತ ಸೇನೆಯಲ್ಲಿ / ನೌಕಾಪಡೆಯಲ್ಲಿ / ವಾಯುಪಡೆಯಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವನೋ ಆ ವರ್ಷಗಳಿಗೆ ಮೂರು ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳ ಸಡಿಲಿಕೆ ಮತ್ತು ವಿಧವೆಯವರಿಗೆ ಮತ್ತು ಅಂಗವಿಕಲರಿಗೆ 10 ವರ್ಷಗಳ ಸಡಿಲಿಕೆ ಹಾಗು ಈಗಾಗಲೆ ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳಿಗೆ ನಿಯಮಾನುಸಾರ ವಯೋಮಿತಿಯಲ್ಲಿ ಸಡಲಿಕೆ ನೀಡಲಾಗುವುದು (ಈ ಬಗ್ಗೆ ಸಡಲಿಕೆ ಕೋರಿದಲ್ಲಿ ಪ್ರಮಾಣಪತ್ರ ಸಲ್ಲಿಸಬೇಕು).

7) ಅರ್ಜಿ ಸಲ್ಲಿಸುವ ವಿಧಾನ :

ನಿಗದಿತ ಅರ್ಜಿ ಶುಲ್ಕ ಪಾವತಿಸಬೇಕಾದ ಶುಲ್ಕ ಹಾಗೂ ವಿಧಾನ:

| | |
|---|---|
| ಸಾಮಾನ್ಯ ವರ್ಗ, ಪ್ರವರ್ಗ-2ಎ, 2ಬಿ ಮತ್ತು 3ಎ ಮತ್ತು 3ಬಿ ಗೆ ಸೇರಿದ ಅಭ್ಯರ್ಥಿಗಳು | ರೂ.100-00. |
| ಪರಿಶಿಷ್ಟ ಜಾತಿ : ಪರಿಶಿಷ್ಟ ಪಂಗಡ , ಪ್ರವರ್ಗ-1 ಹಾಗೂ ಅಂಗವಿಕಲ ಅಭ್ಯರ್ಥಿಗಳಿಗೆ | ರೂ.50-00 |

ನಿಗದಿತ ಶುಲ್ಕವನ್ನು ನ್ಯಾಯಾಲಯದ ವೆಬ್‌ಸೈಟ್ https://districts.ecourts.gov.in/shivamogga/online-recruitment ಅಥವ https://karnatakajudiciary.kar.nic.in/districtrecruitment.asp ರಲ್ಲಿ ನೀಡಲಾದ ಲಿಂಕ್ ಮುಖಾಂತರ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ **State Bank Collect** ಮೂಲಕ **online payment through net banking/credit card/debit card/challan download** ಸೌಲಭ್ಯದ ಮೂಲಕ ಪಾವತಿಸತಕ್ಕದ್ದು, ಶುಲ್ಕವನ್ನು ಆನ್‌ಲೈನ್ ಮೂಲಕ ಪಾವತಿ ಮಾಡಲು ಇಚ್ಛಿಸದ ಅಭ್ಯರ್ಥಿಗಳು ಚಲನ್ ಪ್ರತಿಯನ್ನು ಅಧಿಕೃತ ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಂಡು ಅದರ **print out** ಅನ್ನು ಪಡೆದುಕೊಂಡು ಎಸ್.ಬಿ.ಐ. ನ ಯಾವುದೇ ಶಾಖೆಗೆ ಹಾಜರುಪಡಿಸಿ ಶುಲ್ಕವನ್ನು ಪಾವತಿಸತಕ್ಕದ್ದು, ಇದನ್ನು ಹೊರತುಪಡಿಸಿ ಯಾವುದೇ ಡಿಮ್ಯಾಂಡ್ ಡ್ರಾಫ್ಟ್ ಃ ಪೋಸ್ಟಲ್ ಆರ್ಡರ್ ಃ ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. ಶುಲ್ಕ ಪಾವತಿಸದ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಅಭ್ಯರ್ಥಿಗಳು **ON-LINE** ಮೂಲಕ ಅರ್ಜಿ ಭರ್ತಿ ಮಾಡುವ ಮೊದಲು ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದು.

1. ಅಭ್ಯರ್ಥಿಗಳು ಅರ್ಜಿಯನ್ನು **ON-LINE** ಮೂಲಕ ಸಲ್ಲಿಸುವ ಮೊದಲು ಕೊಟ್ಟಿರುವ ಎಲ್ಲಾ ಸೂಚನೆಗಳನ್ನು ಗಮನವಿಟ್ಟು ಓದಿಕೊಳ್ಳಬೇಕು ಮತ್ತು ತಪ್ಪಾಗದಂತೆ ನೋಡಿಕೊಳ್ಳುವುದು. ಸರಿಯಾದ ಮಾಹಿತಿ ನೀಡದೇ ಇರುವ ಮತ್ತು ಅಪೂರ್ಣ ಮಾಹಿತಿಯುಳ್ಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
2. ಅಭ್ಯರ್ಥಿಗಳು ವಿವಿಧ ವರ್ಗಗಳಿಗೆ ಒಂದೇ ಅರ್ಜಿಯನ್ನು ಸಲ್ಲಿಸಬೇಕು. ಸದ್ರಿ ಅರ್ಜಿಯಲ್ಲಿಯೇ ತಾವು ಕ್ಲೇಮು ಮಾಡುವ ತಮ್ಮ ಮೀಸಲಾತಿಗಳ ಬಗ್ಗೆ ನಮೂದಿಸತಕ್ಕದ್ದು.
3. ಅಭ್ಯರ್ಥಿಗಳು ಮೊಬೈಲ್ ಸಂಖ್ಯೆಯನ್ನು ಕಡ್ಡಾಯವಾಗಿ ನಮೂದಿಸುವುದು ಹಾಗೂ ಇ-ಮೇಲ್ ಐಡಿಯನ್ನು ಹೊಂದಿದ್ದಲ್ಲಿ ನಮೂದಿಸುವುದು. ಒಂದು ವೇಳೆ **SMS** ಅಥವಾ ಇ-ಮೇಲ್ ಮುಖಾಂತರ ಅಭ್ಯರ್ಥಿಗಳಿಗೆ ಸಂದೇಶ ತಲುಪದಿದ್ದಲ್ಲಿ ಈ ಪ್ರಾಧಿಕಾರವು ಹೊಣೆಯಾಗುವುದಿಲ್ಲ.
4. ಅಭ್ಯರ್ಥಿಯು ಭಾವಚಿತ್ರ ಮತ್ತು ಸಹಿಯನ್ನು ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡಲು ಈ ಕೆಳಕಂಡ ನಿರ್ದೇಶನಗಳನ್ನು ಪಾಲಿಸತಕ್ಕದ್ದು.

   ಅ) ಬಣ್ಣದ ಭಾವಚಿತ್ರವು ಇತ್ತೀಚಿನದ್ದಾಗಿದ್ದು ಅಳತೆಯಲ್ಲಿ **5 cm** ಉದ್ದ **x 3.6 cm** ಅಗಲವುಳ್ಳದ್ದಾಗಿರಬೇಕು ಮತ್ತು **50 kb** ಅಳತೆಯದ್ದಾಗಿರಬೇಕು ಹಾಗೂ ಅದು **.jpg** ನಮೂನೆಯಲ್ಲಿರಬೇಕು. ಭಾವಚಿತ್ರದ ಹಿಂಬದಿಯು ಬಿಳಿ ಬಣ್ಣದ್ದಾಗಿರಬೇಕು.

ಅ) ಭಾವಚಿತ್ರವನ್ನು ಸ್ಕ್ಯಾನ್ ಮಾಡಿ ಅರ್ಜಿಗೆ ಅಪ್‌ಲೋಡ್ ಮಾಡಬೇಕು (ಯಾವುದೇ ಕಾರಣಕ್ಕೂ ಭಾವಚಿತ್ರದ ಮೇಲೆ ಸಹಿ ಮಾಡಬಾರದು)

ಇ) ಅಭ್ಯರ್ಥಿಯು ಕಪ್ಪು ಬಾಲ್‌ಪಾಯಿಂಟ್ ಪೆನ್ನಿನಲ್ಲಿ ಬಿಳಿ ಹಾಳೆಯ ಮೇಲೆ ಸಹಿ ಮಾಡಿ (2.5 **cm** ಉದ್ದ **x** 7.5 **cm** ಅಗಲವುಳ್ಳದ್ದಾಗಿರಬೇಕು ಮತ್ತು 26 **kb** ಅಳತೆಯದ್ದಾಗಿರಬೇಕು ಹಾಗೂ ಅದು **.jpg** ನಮೂನೆಯಲ್ಲಿರಬೇಕು.) ಅಪ್‌ಲೋಡ್ ಮಾಡಬೇಕು.

5. ತದನಂತರ ಅಭ್ಯರ್ಥಿಯು **ON - LINE** ಅರ್ಜಿಯಲ್ಲಿ ಕೋರಲಾದ ಎಲ್ಲಾ ಮಾಹಿತಿಗಳನ್ನೂ ಭರ್ತಿ ಮಾಡಿ ನಿಗದಿತ ಶುಲ್ಕ ಪಾವತಿಸಲು ಅರ್ಜಿಯಲ್ಲಿ ತಿಳಿಸಿರುವಂತೆ ಕ್ರಮ ಕೈಗೊಳ್ಳುವುದು. ತದನಂತರ ಅರ್ಜಿಯನ್ನು ಹಾಗೂ ಶುಲ್ಕವನ್ನು ತುಂಬಿದ ಪ್ರತಿಯನ್ನು **down load** ಮಾಡಿಕೊಂಡು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ತಮ್ಮ ಹತ್ತಿರ ಕಾಯ್ದಿರಿಸಿಕೊಳ್ಳತಕ್ಕದ್ದು ಹಾಗೂ ಅರ್ಹತಾ ಪರೀಕ್ಷೆಯ ಸಮಯದಲ್ಲಿ ಹಾಜರುಪಡಿಸತಕ್ಕದ್ದು.
6. ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೇ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯೂವುದೇ ಸಂದರ್ಭದಲ್ಲಿ ಹಿಂದಿರುಗಿಸಲಾಗುವುದಿಲ್ಲ.
7. ನ್ಯಾಯಾಲಯದ ಅಧಿಕೃತ ವೆಬ್‌ಸೈಟ್‌ನಲ್ಲಿ ಅರ್ಜಿಯನ್ನು ಆನ್‌ಲೈನ್ ಮೂಲಕ ನೋಂದಾಯಿಸಲು : ಸಲ್ಲಿಸಲು ದಿನಾಂಕ:**18.1.2019**ರ ರಾತ್ರಿ 11.59ರವರೆಗೆ ಅವಕಾಶವಿರುತ್ತದೆ.

ಮತ್ತು

ಶುಲ್ಕವನ್ನು ಚಲನ್ ಮುಖಾಂತರ ಪಾವತಿಸಲು ದಿನಾಂಕ: **19.01.2019** ಕಡೆಯ ದಿನಾಂಕವಾಗಿದ್ದು ಅದರೊಳಗೆ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ ಶಾಖೆಯ ವ್ಯವಹಾರದ ವೇಳೆಯಲ್ಲಿ ಪಾವತಿಸತಕ್ಕದ್ದು.

8. ಅರ್ಹ ಅಭ್ಯರ್ಥಿಗಳಿಗೆ **SMS & E-Mail** ಮುಖಾಂತರ ಮಾಹಿತಿ ನೀಡಲಾಗುವುದು. ಸಂದರ್ಶನಕ್ಕೆ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ನ್ಯಾಯಾಲಯದ ವೆಬ್‌ಸೈಟಿನಲ್ಲಿ ಪ್ರಕಟಿಸಲಾಗುವುದು. ಸದರಿ ಪಟ್ಟಿಯ ಆಧಾರದ ಮೇಲೆ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಕರೆಯಲಾಗುವುದು.
9. ಆನ್‌ಲೈನ್ ಹೊರತುಪಡಿಸಿ ಇತರೆ ಯಾವುದೇ ವಿಧಾನದಲ್ಲಿ ಕಳುಹಿಸಿದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

10. ಸೇವಾ ನಿರತ ಅಭ್ಯರ್ಥಿಗಳು ಅರ್ಜಿಗಳ ಸ್ವೀಕೃತಿಗಾಗಿ ನಿಗದಿಪಡಿಸಲಾದ ದಿನಾಂಕ ಹಾಗೂ ಸಮಯವನ್ನು ಮೀರದಂತೆ ಆನ್‌ಲೈನ್‌ನಲ್ಲಿ ತಮ್ಮ ಅರ್ಜಿಗಳನ್ನು ಸಲ್ಲಿಸತಕ್ಕದ್ದು ಮತ್ತು ಸಂಬಂಧಪಟ್ಟ ಪ್ರಾಧಿಕಾರದಿಂದ ನೀಡಲಾದ " ನಿರಾಕ್ಷೇಪಣಾ ಪ್ರಮಾಣಪತ್ರ " ವನ್ನೂ ಹೊಂದಿರತಕ್ಕದ್ದು.
11. ವಿವಿಧ ಮೀಸಲಾತಿ ಅಡಿಯಲ್ಲಿ ಮೀಸಲಾತಿಯನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು ಸಕ್ಷಮ ಪ್ರಾಧಿಕಾರಗಳು ನೀಡಿದ ಪ್ರಮಾಣಪತ್ರಗಳನ್ನು ಹೊಂದಿರತಕ್ಕದ್ದು. ಗ್ರಾಮೀಣ ಪ್ರವರ್ಗದ ಅಡಿಯಲ್ಲಿ ಮೀಸಲಾತಿಯನ್ನು ಕ್ಲೇಮು ಮಾಡುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ಕೆನೆಪದರ ಪ್ರಮಾಣಪತ್ರವನ್ನು (**Creamy Layer Certificate**) ಸಲ್ಲಿಸತಕ್ಕದ್ದು.
12. ಮೇಲ್ಕಂಡ ಕ್ರಮ ಸಂಖ್ಯೆ 10 ಮತ್ತು 11 ಅಡಿಯಲ್ಲಿ ಪ್ರಯೋಜನಗಳನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದಂದು ಅಥವಾ ಅದಕ್ಕಿಂತ ಮುಂಚೆ ಸಕ್ಷಮ ಪ್ರಾಧಿಕಾರಿಗಳು ನೀಡಿದ ಸಂಬಂಧಪಟ್ಟ ಪ್ರಮಾಣಪತ್ರಗಳನ್ನು ಹೊಂದಿರತಕ್ಕದ್ದು.
13. ಮಾಜಿ ಸೈನಿಕ ವರ್ಗದ ಅಡಿಯಲ್ಲಿ ಮೀಸಲಾತಿಯನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು ಮಿಲಿಟರಿ ಸೇವೆಯಿಂದ ಬಿಡುಗಡೆ ಮಾಡಲಾದ ಅಥವಾ ವಿಮುಕ್ತಿಗೊಳಿಸಿದ ಪ್ರಮಾಣಪತ್ರವನ್ನು ಹೊಂದಿರತಕ್ಕದ್ದು.
14. ಅಭ್ಯರ್ಥಿಗಳು ದಾಖಲೆಗಳ ಪರಿಶೀಲನೆಯ ಸಮಯದಲ್ಲಿ, ಶೈಕ್ಷಣಿಕ ವಿದ್ಯಾರ್ಹತೆ (ಜನ್ಮ ದಿನಾಂಕವನ್ನು ತೋರಿಸಲು ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣಪತ್ರ, ಬೆರಳಚ್ಚು ಪರೀಕ್ಷೆಗಳ ಪ್ರಮಾಣಪತ್ರಗಳು, ಜಾತಿ ಪ್ರಮಾಣ ಪತ್ರ, ಗ್ರಾಮೀಣಃ ಕನ್ನಡ ಮಾಧ್ಯಮ ಃ ಮಾಜಿ ಸೈನಿಕರು ಃವಿಧವೆಯರುಃ ಅಂಗವಿಕಲರು ಸಂಬಂಧಿಸಿದಂತೆ ಕ್ಲೇಮು ಮಾಡಿದ ಮೀಸಲಾತಿಗಳು ಇವುಗಳಿಗೆ ಸಂಬಂಧಿಸಿದಂತೆ ಅಗತ್ಯ ಮೂಲ ದಾಖಲೆಗಳನ್ನು ಪರಿಶೀಲನೆಗಾಗಿ ಸಲ್ಲಿಸತಕ್ಕದ್ದು. ಪರಿಶೀಲನೆ ಮಾಡುವಾಗ ಅರ್ಜಿದಾರರು ಅರ್ಜಿಯಲ್ಲಿ ಒದಗಿಸಿರುವ ಮಾಹಿತಿಯು ಸುಳ್ಳೆಂದು ಕಂಡುಬಂದಲ್ಲಿ, ಆಗ ಅವರ ಅಭ್ಯರ್ಥಿಕೆಯು ತಿರಸ್ಕೃತವಾಗುತ್ತದೆ ಹಾಗೂ ಅವರು ಸುಳ್ಳು ಮಾಹಿತಿ ನೀಡಿದ್ದಕ್ಕಾಗಿ ಕ್ರಿಮಿನಲ್ ಪ್ರಾಸಿಕ್ಯೂಷನ್‌ಗೂ ಸಹಾ ಗುರಿಯಾಗಬೇಕಾಗುತ್ತದೆ.
15. ಅಭ್ಯರ್ಥಿಯು ನೇಮಕಾತಿ ಸಂಬಂಧದಲ್ಲಿ ಯಾವುದೇ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಭಿಸಿರುವುದು ಕಂಡುಬಂದಲ್ಲಿ ಅಂತಹವರನ್ನು ನೇಮಕಾತಿಗೆ ಪರಿಗಣಿಸಲಾಗುವುದಿಲ್ಲ.
16. ಗ್ರಾಮೀಣ ಅಭ್ಯರ್ಥಿಗಳು, ಕನ್ನಡ ಮಾಧ್ಯಮ, ಮಹಿಳೆ ಹಾಗೂ ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಮೊಸಲಿರಿಸಿದ ರಿಕ್ತ ಸ್ಥಾನಗಳಿಗೆ ಅರ್ಹ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದ ಪಕ್ಷದಲ್ಲಿ ಆಯಾ ವರ್ಗಕ್ಕೆ ಸೇರಿದ ಇತರೆ ಅರ್ಹ ಅಭ್ಯರ್ಥಿಗಳಿಂದ ಭರ್ತಿ ಮಾಡಿಕೊಳ್ಳಲಾಗುವುದು.

17. ಅಂಗವಿಕಲರಿಗೆ ಮೀಸಲಾದ ಹುದ್ದೆಗಳಿಗೆ ಅಧಿಸೂಚಿಸಿರುವ ಅಂಗವಿಕಲತೆ ಹೊಂದಿರುವ ಅಭ್ಯರ್ಥಿ ಲಭ್ಯವಿಲ್ಲದೇ ಇದ್ದಲ್ಲಿ ಅಂತಹ ರಿಕ್ತ ಸ್ಥಾನವನ್ನು ಮುಂದಿನ ನೇಮಕಾತಿಗೆ ಮುಂದೊಯ್ಯಲಾಗುವುದು.

18. ಆಯ್ಕೆಯಾದ ಅಭ್ಯರ್ಥಿಗಳು ಕರ್ನಾಟಕ ಸೇವಾ ನಿಯಮ (ಪರಿವೀಕ್ಷಣೆ ನಿಯಮಗಳು) 1977ರ ಪ್ರಕಾರ ಎರಡು ವರ್ಷಗಳ ಕಾಲ ಪರಿವೀಕ್ಷಣಾ ಅವಧಿಯಲ್ಲಿರುತ್ತಾರೆ. ಈ ಅವಧಿಯಲ್ಲಿ ಅಭ್ಯರ್ಥಿಗಳು ಹುದ್ದೆಗೆ ನಿಗದಿಪಡಿಸಿರುವ ಇಲಾಖಾ ಪರೀಕ್ಷೆಗಳಲ್ಲಿ ಮತ್ತು ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಬೇಕು.

19. ಬೆರಳಚ್ಚುಗಾರ ಹುದ್ದೆಗೆ ಆಯ್ಕೆಯಾದ ಅಭ್ಯರ್ಥಿಗಳು ಆಯ್ಕೆಯಾದ ಮೂರು ತಿಂಗಳ ಒಳಗೆ ಸರ್ಕಾರವು ಅನುಮೋದಿಸಿದ ಏಜೆನ್ಸಿಯಲ್ಲಿ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ಸರ್ಕಾರದ ಆದೇಶದ ಪ್ರಕಾರ ಪಾಸು ಮಾಡತಕ್ಕದ್ದು.

20. <u>ಆಯ್ಕೆ ವಿಧಾನ :</u>

ಅಭ್ಯರ್ಥಿಗಳ ಆಯ್ಕೆಯು ಕರ್ನಾಟಕ ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರೆ ಹುದ್ದೆಗಳ) (ನೇಮಕಾತಿ) ನಿಯಮ 1982 ಮತ್ತು (ತಿದ್ದುಪಡಿ) ನಿಯಮ 2007ರ ಪ್ರಕಾರ.

(1) ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ 15 ನಿಮಿಷಗಳ ಉಕ್ತಲೇಖನವನ್ನು ಕಂಪ್ಯೂಟರ್‌ಃಬೆರಳಚ್ಚುಯಂತ್ರಗಳ ಮೂಲಕ ಬೆರಳಚ್ಚುಪಡಿಸತಕ್ಕದ್ದು.
(2) ಪ್ರತಿ ಅರ್ಹತಾ ಪರೀಕ್ಷೆಯು ಗರಿಷ್ಠ 100 ಅಂಕಗಳಾಗಿದ್ದು ಪ್ರತಿ ಪರೀಕ್ಷೆಯಲ್ಲೂ ಉತ್ತೀರ್ಣತೆಗೆ ಕನಿಷ್ಠ 50 ಅಂಕಗಳನ್ನು ಅಭ್ಯರ್ಥಿಗಳು ಪಡೆಯಲೇಬೇಕಾಗಿರುತ್ತದೆ.
(3) ಅರ್ಹತಾ ಪರೀಕ್ಷೆಯಲ್ಲಿ ಉತ್ತೀರ್ಣರಾದ ಅಭ್ಯರ್ಥಿಗಳನ್ನು 1:5ರ ಅನುಪಾತದಲ್ಲಿ ಸಂದರ್ಶನಕ್ಕೆ ಕರೆಯಲಾಗುವುದು.
(4) ಶೈಕ್ಷಣಿಕ ವಿದ್ಯಾರ್ಹತೆಯಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳು ಮತ್ತು ಅರ್ಹತಾ ಪರೀಕ್ಷೆಯಲ್ಲಿ ಉತ್ತೀರ್ಣರಾದವರು ಗಳಿಸಿರುವ ಶೇಕಡಾವಾರು ಅಂಕಗಳು ಮತ್ತು ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.
(5) ಸಂದರ್ಶನಕ್ಕೆ 10 ಅಂಕಗಳನ್ನು ನಿಗದಿಪಡಿಸಲಾಗಿರುತ್ತದೆ.

P.M.H. 12/12

( ಪ್ರಭಾವತಿ ಎಂ ಹಿರೇಮಠ )
ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು,
ಶಿವಮೊಗ್ಗ.
Prl. District & Sessions Judge
Shivamogga.

<u>ಪ್ರತಿಯನ್ನು ವಿಲೇಖನಾಧಿಕಾರಿಗಳು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ಇವರಿಗೆ (ಪತ್ರದೊಂದಿಗೆ) ಸಲ್ಲಿಸಲಾಗಿದೆ.</u>

ಪ್ರತಿಯನ್ನು :-

(1) ಪ್ರಧಾನ ಕಾರ್ಯದರ್ಶಿಗಳು, ಕಾನೂನು ಇಲಾಖೆ, ಬೆಂಗಳೂರು.
(2) ನಿರ್ದೇಶಕರು, ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ, ಬೆಂಗಳೂರು ಇವರಿಗೆ.
(3) ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಶಿವಮೊಗ್ಗ.
(4) ಜಿಲ್ಲಾ ವಾರ್ತಾ ಮತ್ತು ಪ್ರಚಾರ ಇಲಾಖೆ, ಶಿವಮೊಗ್ಗ ಇವರಿಗೆ ವ್ಯಾಪಕ ಪ್ರಚಾರಕ್ಕಾಗಿ.
(5) ಪ್ರಧಾನ ನಗರ ವ್ಯವಹಾರ ಮತ್ತು ಸೆಷನ್ಸ್ ನ್ಯಾಯಾಧೀಶರು, ಬೆಂಗಳೂರು ನಗರ ಹಾಗೂ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬಾಗಲಕೋಟೆ, ಬೆಳಗಾವಿ, ಬಳ್ಳಾರಿ, ಬೀದರ, ಚಾಮರಾಜನಗರ, ಚಿಕ್ಕಮಗಳೂರು, ಚಿಕ್ಕಬಳ್ಳಾಪುರ, ಚಿತ್ರದುರ್ಗ, ದಕ್ಷಿಣಕನ್ನಡ, ದಾವಣಗೆರೆ, ಧಾರವಾಡ, ಗದಗ, ಹಾಸನ, ಹಾವೇರಿ, ಕಲಬುರಗಿ, ಕಾರವಾರ, ಕೊಡಗು, ಕೋಲಾರ, ಕೊಪ್ಪಳ, ಮಂಡ್ಯ ಮೈಸೂರು, ರಾಯಚೂರು, ರಾಮನಗರ, ತುಮಕೂರು, ಉಡುಪಿ, ವಿಜಯಪುರ, ಯಾದಗಿರಿ ಇವರಿಗೆ ಮಾಹಿತಿ ಮತ್ತು ವ್ಯಾಪಕ ಪ್ರಚಾರಕ್ಕಾಗಿ.
(6) ಶಿವಮೊಗ್ಗ ಜಿಲ್ಲೆಯ ಎಲ್ಲಾ ನ್ಯಾಯಾಲಯಗಳ ಸೂಚನಾ ಫಲಕದಲ್ಲಿ ಪ್ರಕಟಿಸಲು.